All India Radio: Bangalore
Regional Bulletin In Kannada
28.12.2025 / 6.40 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು :

- ಭಾರತೀಯ ನೌಕಾಪಡೆಯ ಐ.ಎನ್.ಎಸ್ ವಾಘಶೀರ್ ಜಲಾಂತರ್ಗಾಮಿ, ರಾಷ್ಟ್ರೀಯ ಭದ್ರತೆಯ ಅಚಲ ಬದ್ಧತೆಗೆ ಉಜ್ವಲ ಉದಾಹರಣೆ - ರಾಷ್ಟ್ರಪತಿ ದ್ರೌಪದಿ ಮುರ್ಮು
- ಸರ್ಕಾರ ಒದಗಿಸುವ ವೇದಿಕೆಗಳ ಮೂಲಕ ಜನಸಾಮಾನ್ಯರ ಸಮಸ್ಯೆಗಳಿಗೆ ಪರಿಹಾರ, ಸಲಹೆ ಒದಗಿಸಲು ಮುಂದಾಗಬೇಕೆಂದು ಯುವಜನತೆಗೆ ಮನದ ಮಾತಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಕರೆ
- ಬೌದ್ಧಧರ್ಮ ಗುರು ದಲೈಲಾಮಾ ಅವರ ಅಹಿಂಸೆ ಮತ್ತು ಕರುಣೆಯ ಸಂದೇಶ ಸಮಾಜಕ್ಕೆ ಅತ್ಯಂತ ಅವಶ್ಯಕ - ಕೇಂದ್ರ ಸಚಿವ ಕಿರಣ್ ರಿಜಿಜು
- ರಾಜ್ಯದಲ್ಲಿ ಮಾದಕ ದ್ರವ್ಯ ತಯಾರಿಕೆ ಜಾಲ ಪತ್ತೆ - ಸರ್ಕಾರದ ವೈಫಲ್ಯ ಮುಖ್ಯಮಂತ್ರಿ ರಾಜೀನಾಮೆಗೆ ಬಿಜೆಪಿ ಆಗ್ರಹ
- ಬೆಂಗಳೂರು ವಿಭಾಗದ ೩೫೨ ರೈಲುಗಳ ಆಗಮನ ನಿರ್ಗಮನ ಸಮಯಗಳಲ್ಲಿ ಪರಿಷ್ಕರಣೆ; ಜನವರಿ ೧ ರಿಂದ ಜಾರಿ

<><><><>

ಐ.ಎನ್.ಎಸ್ ವಾಘಶೀರ್ ಜಲಾಂತರ್ಗಾಮಿ, ಭಾರತೀಯ ನೌಕಾಪಡೆಯ ವೃತ್ತಿಪರ ಶ್ರೇಷ್ಠತೆ, ಯುದ್ಧಸನ್ನದ್ಧತೆ ಮತ್ತು ರಾಷ್ಟ್ರೀಯ ಭದ್ರತೆಯ ಅಚಲ ಬದ್ಧತೆಗೆ ಒಂದು ಉಜ್ವಲ ಉದಾಹರಣೆಯಾಗಿದೆ ರಾಷ್ಟ್ರಪತಿ ದ್ರೌಪದಿ ಮುರ್ಮು ಬಣ್ಣಿಸಿದ್ದಾರೆ. ಕಾರವಾರದ ಐ.ಎನ್.ಎಸ್ ಕದಂಬ ನೌಕಾನೆಲೆಯಿಂದ ಐ.ಎನ್.ಎಸ್ ವಾಘಶಿರ್ ಜಲಾಂತರಗಾಮಿಯಲ್ಲಿ ಸಮುದ್ರಯಾನದ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿರುವ ಅವರು, ಸಮುದ್ರಯಾನದ ಸಮಯದಲ್ಲಿ, ಭಾರತದ ಕಡಲ ಕಾರ್ಯತಂತ್ರದಲ್ಲಿ ಜಲಾಂತರ್ಗಾಮಿ ಪಡೆಯ ಪಾತ್ರ ಮತ್ತು ರಾಷ್ಟ್ರೀಯ ಕಡಲ ಹಿತಾಸಕ್ತಿಗಳನ್ನು ಕಾಪಾಡುವಲ್ಲಿ ಕಾರ್ಯಾಚರಣೆಯ ಸಾಮರ್ಥ್ಯಗಳು ಮತ್ತು

ಕೊಡುಗೆಗಳ ಬಗ್ಗೆ ಮಾಹಿತಿ ಪಡೆಯಲಾಯಿತು ಎಂದು ತಿಳಿಸಿದ್ದಾರೆ. ಐಎನ್‌ಎಸ್ ವಾಘಶೀರ್ ನ ಸಿಬ್ಬಂದಿಯೊಂದಿಗೆ ಈ ಕುರಿತು ಸಂವಹನ ನಡೆಸಲಾಯಿತು. ಅವರ ಸಮರ್ಪಣೆ, ಬದ್ಧತೆ ಮತ್ತು ನಿಸ್ವಾರ್ಥ ಸೇವೆಯ ಮನೋಭಾವ ಶ್ಲಾಘನೀಯ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಪೋಸ್ಟ್ ಮಾಡಿದ್ದಾರೆ.

<><><><>

ಸರ್ಕಾರ ಒದಗಿಸುವ ವೇದಿಕೆಗಳ ಮೂಲಕ ಯುವಜನತೆ ಜನಸಾಮಾನ್ಯರ ಸಮಸ್ಯೆಗಳಿಗೆ ಪರಿಹಾರ ಸಲಹೆ ಒದಗಿಸಲು ಮುಂದಾಗಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಮನದ ಮಾತಿನಲ್ಲಿ ಇಂದು ಕರೆ ನೀಡಿದ್ದಾರೆ. ಯುವಜನತೆಗೆ ತಮ್ಮ ಸಾಮರ್ಥ್ಯ, ಆಸಕ್ತಿ ಮತ್ತು ಪ್ರತಿಭೆಗಳನ್ನು ಸಾದರ ಪಡಿಸಲು ಸರ್ಕಾರ ಕಾಲಕಾಲಕ್ಕೆ ಹೆಕಥ್ ಲಾನ್ ಗಳನ್ನು ಆಯೋಜಿಸುತ್ತಿದ್ದು, ಇದರಲ್ಲಿ ಯುವಜನತೆ ಭಾಗವಹಿಸಬೇಕೆಂದು ಆಗ್ರಹಪಡಿಸಿದರು. ಆಕಾಶವಾಣಿಯ ತಿಂಗಳ ಕಾರ್ಯಕ್ರಮ ಮನ್ ಕಿ ಬಾತ್‌ನಲ್ಲಿ ಜನತೆ ಉದ್ದೇಶಿಸಿದ ಭಾಷಣದಲ್ಲಿ ಪ್ರಧಾನಿ ಅವರು ೨೦೨೫ಡಿ ಹೆಕಥ್ ಲಾನ್ ವೇದಿಕೆಯಲ್ಲಿ ಯುವಜನತೆ ನೂರಾರು ಸಮಸ್ಯೆಗಳಿಗೆ ನಿಖರವಾದ ಪರಿಹಾರಗಳನ್ನು ಸಹ ಒದಗಿಸಿದ್ದಾರೆ ಎಂದು ತಿಳಿಸಿದ್ದಾರೆ. ಸಂಸ್ಕೃತಿಯ ಬೇರುಗಳನ್ನು ಹೊಸ ಚಿಂತನೆ ಮತ್ತ ಹೊಸ ವಿಧಾನಗಳೊಂದಿಗೆ ಮುಂದಿನ ಪೀಳಿಗೆ ಭದ್ರವಾಗಿ ಸಂರಕ್ಷಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಮನ್ ಕಿ ಬಾತ್ ನಲ್ಲಿ ಸಂತಸ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿರುವ ಭಾರತೀಯ ವಿಜ್ಞಾನ ಸಂಸ್ಥೆಯ ಕಲಾಸಕ್ತಿ ಹಾಗೂ ದುಬಾಯ್ ನಲ್ಲಿರುವ ಕನ್ನಡ ಕುಟುಂಬಗಳ ಕನ್ನಡ ಪಾಠಶಾಲೆಗಳ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ೧೨೯ನೇ ಆವೃತ್ತಿಯ ಮನದಾಳದ ಮಾತಿನಲ್ಲಿ ಉಲ್ಲೇಖಿಸಿದ್ದಾರೆ. ಸಂಶೋಧನೆ ಮತ್ತು ನಾವೀನ್ಯತೆ ಭಾರತೀಯ ವಿಜ್ಞಾನ ಸಂಸ್ಥೆಯ ವಿಶೇಷತೆಯಾಗಿದೆ. ಕೆಲವು ವರ್ಷಗಳ ಹಿಂದೆ ಅಲ್ಲಿನ ಕೆಲವು ವಿದ್ಯಾರ್ಥಿಗಳು ಅಧ್ಯಯನ ಮತ್ತು ಸಂಶೋಧನೆ ನಡುವೆ ಸಂಗೀತಕ್ಕೂ ಸ್ಥಾನ ನೀಡಬೇಕು ಎಂದು ಅಭಿಪ್ರಾಯ ಪಟ್ಟರು. ಪುಟ್ಟ ಸಂಗೀತ ತರಬೇತಿ ಪ್ರಾರಂಭವಾಯಿತು ಬೆಳೆದು ನಿಂತ ಅದನ್ನು ಇಂದು ಗೀತಾಂಜಲಿ ಐಐಎಸ್‌ಸಿ ಎಂದು ಗುರುತಿಸಲಾಗುತ್ತದೆ. ಇದು ತರಗತಿ ಮಾತ್ರವಾಗಿರದೇ ಸಾಂಸ್ಕೃತಿಕ ಕೇಂದ್ರವಾಗಿದೆ. ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ ಜಾನಪದ ಸಂಪ್ರದಾಯಗಳನ್ನು ಮತ್ತು ಶಾಸ್ತ್ರೀಯ ಪ್ರಕಾರಗಳನ್ನು ವಿದ್ಯಾರ್ಥಿಗಳು ಕುಳಿತು ಅಭ್ಯಾಸ

ಮಾಡುತ್ತಾರೆ. ಪ್ರಾಧ್ಯಾಪಕರು ಒಟ್ಟಿಗೆ ಕುಳಿತುಕೊಳ್ಳುತ್ತಾರೆ ಅವರ ಕುಟುಂಬಗಳು ಸಹಪಾಲ್ಗೊಳ್ಳುತ್ತವೆ. ೨೦೦ಕ್ಕೂ ಹೆಚ್ಚು ಜನರು ಇದರ ನಂಟು ಹೊಂದಿದ್ದಾರೆ. ವಿದೇಶಗಳಿಗೆ ತೆರಳಿದವರು ಕೂಡ ಆನಲೈನ್ ಮೂಲಕ ಈ ಕೊಂಡಿಯ ಸಂಪರ್ಕವನ್ನು ಹಿಡಿದಿಟ್ಟುಕೊಂಡಿದ್ದಾರೆ ಎಂದು ಪ್ರಧಾನಿ ತಿಳಿಸಿದ್ದಾರೆ. ಮೂಲ ಬೇರುಗಳೊಂದಿಗೆ ಸಂಪರ್ಕ ಉಳಿಸಿಕೊಳ್ಳುವ ಪ್ರಯತ್ನವನ್ನು ದುಬಾಯ್‌ನಲ್ಲಿ ವಾಸಿಸುವ ಕನ್ನಡ ಕುಟುಂಬಗಳು ಮಾಡುತ್ತಿವೆ. ಕನ್ನಡ ಪಾಠಶಾಲೆ ಮೂಲಕ ಮಕ್ಕಳಿಗೆ ಕನ್ನಡ ಬರೆಯಲು ಮತ್ತು ಮಾತನಾಡಲು ಕಲಿಸಲಾಗುತ್ತಿದೆ. ಇಂದು ಸಾವಿರಕ್ಕೂ ಹೆಚ್ಚು ಮಕ್ಕಳು ಕನ್ನಡ ಕಲಿಯುತ್ತಿದ್ದಾರೆ ನಿಜಕ್ಕೂ ಕನ್ನಡ ನಾಡು ನುಡಿ ನಮ್ಮ ಹೆಮ್ಮೆ. ಕನ್ನಡದ ಭೂಮಿ ಮತ್ತು ಭಾಷೆ ನಮ್ಮ ಹೆಮ್ಮೆಯಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಧ್ವನಿ : ಪ್ರಧಾನಿ ನರೇಂದ್ರ ಮೋದಿ ( ೩೮ ಸೆಕೆಂಡುಗಳು)

ಭಾರತೀಯ ವಿಜ್ಞಾನ ಸಂಸ್ಥೆಯ ಗೀತಾಂಜಲಿ ಐಎಎಸ್‌ಸಿಯ ಸಂಸ್ಥಾಪಕಿ ಗೀತಾ ಅನಂತ್ ಸಾಂಸ್ಕೃತಿಕ ಕೇಂದ್ರದ ಬಗ್ಗೆ ಮಾಹಿತಿ ನೀಡಿದ್ದಾರೆ.

ಧ್ವನಿ : ಗೀತಾ ಅನಂತ್ ( ೨೯ ಸೆಕೆಂಡುಗಳು)

<><><><>

ಮನರೇಗ ಹೆಸರು ಬದಲಾವಣೆ ವಿರೋಧಿಸಿ ಜನವರಿ ೫ನೇ ತಾರೀಖಿನಿಂದ ಹೊಸ ಹೋರಾಟ ನಡೆಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಹಾಗೂ ಪ್ರದೇಶ ಕಾಂಗ್ರೆಸ್ ಅಧ್ಯಕ್ಷ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ಅವರು ಕರ್ನಾಟಕ ಪ್ರದೇಶ ಕಾಂಗ್ರೆಸ್ ಕಚೇರಿಯಲ್ಲಿ ನಡೆದ ಕಾಂಗ್ರೆಸ್ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು. ಎರಡು ಮೂರು ತಿಂಗಳಲ್ಲಿ ಜಿಲ್ಲಾ ಹಾಗೂ ತಾಲೂಕು ಪಂಚಾಯತಿ ಚುನಾವಣೆಗಳನ್ನು ನಡೆಸಬೇಕಿದೆ ಇದಕ್ಕಾಗಿ ಈಗಿನಿಂದಲೆ ತಯಾರಿ ಮಾಡಿಕೊಳ್ಳುವಂತೆ ಸೂಚಿಸಲಾಗಿದೆ ಎಂದು ಹೇಳಿದರು. ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಚುನಾವಣೆಗೆ ಸಂಬಂಧಿಸಿದಂತೆ ಇಂದಿನಿಂದ ಆಕಾಂಕ್ಷಿ ಅಭ್ಯರ್ಥಿಗಳ ಅರ್ಜಿಯನ್ನು ಬಿಡುಗಡೆ ಮಾಡಲಾಗುತ್ತದೆ ಎಂದು ಅವರು ಹೇಳಿದರು.

<><><><>

ಹಿಂಸೆ ಮತ್ತು ಸಂಘರ್ಷಗಳಿಂದ ಕೂಡಿರುವ ಇಂದಿನ ಜಗತ್ತಿಗೆ ದಲೈಲಾಮಾ ಅವರ ಅಹಿಂಸೆ ಮತ್ತು ಕರುಣೆಯ ಸಂದೇಶಗಳು ಅತ್ಯಂತ ಅವಶ್ಯಕವಾಗಿವೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳು ಹಾಗೂ ಅಲ್ಪಸಂಖ್ಯಾತರ ಖಾತೆ ಸಚಿವ ಕಿರಣ್ ರಿಜಿಜು ಹೇಳಿದ್ದಾರೆ. ಅವರು ಉತ್ತರಕನ್ನಡ ಜಿಲ್ಲೆಯ ಮುಂಡಗೋಡದ ಟಿಬೇಟಿಯನ್ ಕಾಲೋನಿಯಲ್ಲಿ ನಡೆದ ಬೌದ್ಧ ಸಮಾವೇಶದ ಉದ್ಘಾಟನೆ ನೆರವೇರಿಸಿ ಮಾತನಾಡಿದರು. ದಲೈಲಾಮಾ ಅವರನ್ನು ಪ್ರಾಚೀನ ಭಾರತೀಯ ಜ್ಞಾನ ಮತ್ತು ಆಧುನಿಕ ಪ್ರಪಂಚದ ನಡುವಿನ ಜೀವಂತ ಸೇತುವೆ ಎಂದು ಬಣ್ಣಿಸಿದ ಕೇಂದ್ರ ಸಚಿವರು, ದಲೈಲಾಮಾ ಅವರು ಭಾರತವನ್ನು ತಮ್ಮ 'ಆರ್ಯಭೂಮಿ' ಎಂದು ಕರೆಯುತ್ತಾರೆ. ಅವರು ಭಾರತದ ವಾಸ್ತವ್ಯದಲ್ಲಿರುವುದು ದೇಶಕ್ಕೆ ಸಿಕ್ಕಿರುವ ದೊಡ್ಡ ಸೌಭಾಗ್ಯ ಹಾಗೂ ಹೆಮ್ಮೆ ಎಂದರು. ದೇಶದಲ್ಲಿ ಶಾಂತಿಯುತವಾಗಿ ನೆಲೆಸಿರುವ ಟಿಬೆಟಿಯನ್ ಸಮುದಾಯಕ್ಕೆ ಭಾರತ ಸರ್ಕಾರದ ವಿವಿಧ ಕಲ್ಯಾಣ ಯೋಜನೆಗಳನ್ನು ತಲುಪಿಸಲು ತಾವು ಬದ್ಧರಾಗಿರುವುದಾಗಿ ಅವರು ತಿಳಿಸಿದರು. ಉತ್ತರಕನ್ನಡ ಕ್ಷೇತ್ರದ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಮಾತನಾಡಿ, ದಲೈಲಾಮಾ ಅವರು ಕೇವಲ ಟಿಬೆಟ್ ಸಮುದಾಯಕ್ಕೆ ಸೀಮಿತವಾದವರಲ್ಲ, ಅವರು ಇಡೀ ಜಗತ್ತಿಗೆ ಶಾಂತಿ ಮತ್ತು ಅಹಿಂಸೆಯ ಸಂದೇಶ ನೀಡುತ್ತಿರುವ ಮಹಾನ್ ಸಂತ ಎಂದು ಬಣ್ಣಿಸಿದರು.

<><><><>

ರಾಜ್ಯದ ಮೂರು ಸ್ಥಳಗಳಲ್ಲಿ ಮಾದಕ ದ್ರವ್ಯ ತಯಾರಿಕೆ ಅವ್ಯಾಹತವಾಗಿ ನಡೆದಿರುವುದು ಮಹಾರಾಷ್ಟ್ರ ಪೊಲೀಸರಿಂದ ಬೆಳಕಿಗೆ ಬಂದಿದ್ದು ಇದು ರಾಜ್ಯ ಸರ್ಕಾರದ ಆಡಳಿತದ ವೈಫಲ್ಯವಾಗಿದೆ, ನೈತಿಕ ಹೊಣೆಗಾರಿಕೆ ಹೊತ್ತು ಮುಖ್ಯಮಂತ್ರಿ ಸಿದ್ಧರಾಮಯ್ಯ ನೇತೃತ್ವದ ಸರ್ಕಾರ ರಾಜೀನಾಮೆ ನೀಡಬೇಕೆಂದು ಬಿಜೆಪಿ ಧುರೀಣ ಮತ್ತು ಮಾಜಿ ಉಪಮುಖ್ಯಮಂತ್ರಿ ಅಶ್ವತ್ಥ ನಾರಾಯಣ ಒತ್ತಾಯಿಸಿದ್ದಾರೆ. ಅವರು ಬೆಂಗಳೂರಿನಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿ ಕಲಬುರ್ಗಿ , ಮೈಸೂರು, ಬೆಂಗಳೂರುಗಳಲ್ಲಿ ಮಾದಕ ದ್ರವ್ಯ ತಯಾರಿಕೆ ಆಗುತ್ತಿರುವುದು ಮಹಾರಾಷ್ಟ್ರ ಪೊಲೀಸರ ಕಾರ್ಯಚರಣೆಯಿಂದ ಹೊರಬಂದಿದೆ. ಇದು ಪೊಲೀಸ್ ವ್ಯವಸ್ಥೆಯ ವೈಫಲ್ಯತೆಯಾಗಿದೆ ಎಂದು ಆಪಾದಿಸಿದರು. ರಾಜ್ಯ ಸರ್ಕಾರ ತುಷ್ಟೀಕರಣದ ರಾಜಕೀಯ ಮಾಡುತ್ತಿದೆ. ಬೆಂಗಳೂರಿನಲ್ಲಿ ೨೦೦ ಕುಟುಂಬಗಳ ಅಕ್ರಮ ಒತ್ತುವರಿ ತೆರವು

ಪ್ರಕರಣಕ್ಕೆ ಸಂಬಂಧಿಸಿದಂತೆ ಕೇರಳದ ಮುಖ್ಯಮಂತ್ರಿ ಹಾಗೂ ಕಾಂಗ್ರೆಸ್ ಪಕ್ಷದ ಪದಾಧಿಕಾರಿಗಳು ಮಾತನಾಡುತ್ತಿದ್ದು, ಇದು ರಾಜ್ಯದ ಆಡಳಿತದಲ್ಲಿ ಹಸ್ತಕ್ಷೇಪವಾಗಿದೆ, ರಾಜ್ಯಸರ್ಕಾರದ ಅಸಮರ್ಥತೆ ಮತ್ತು ಅದಕ್ಷತೆಯನ್ನು ಎತ್ತಿ ತೋರಿಸುತ್ತದೆ ಎಂದು ಅಶ್ವತ್ಥ ನಾರಾಯಣ ಟೀಕಿಸಿದರು. ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಗದಗದಲ್ಲಿಂದು ಮಾಧ್ಯಮಗಳೊಂದಿಗೆ ಮಾತನಾಡಿ ರಾಜ್ಯದಲ್ಲಿ ಮಾದಕ ದ್ರವ್ಯ ಬಳಕೆ ಹೆಚ್ಚಿದೆ. ಮಹಾರಾಷ್ಟ್ರ ಪೊಲೀಸರು ಕರ್ನಾಟಕಕ್ಕೆ ಬಂದು ಮಾದಕ ದ್ರವ್ಯ ಸಾಗಾಟಗಾರರನ್ನು ಪತ್ತೆಹಚ್ಚುತ್ತಾರೆ ಎಂದರೆ ಇಲ್ಲಿನ ಪೊಲೀಸರು ಏನು ಮಾಡುತ್ತಿದ್ದಾರೆ ಎನ್ನುವ ಪ್ರಶ್ನೆ ಉದ್ಭವಿಸುತ್ತದೆ. ಮುಖ್ಯಮಂತ್ರಿಗಳು ಈ ಬಗ್ಗೆ ಎಚ್ಚೆತ್ತುಕೊಳ್ಳಬೇಕು ಎಂದು ಹೇಳಿದರು. ಮಾದಕ ದ್ರವ್ಯ ಕಳ್ಳ ಸಾಗಾಟ ಮಾಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

<><><><>

ಪ್ರಯಾಣಿಕರಿಗೆ ಅನುಕೂಲವಾಗುವಂತೆ ಬೆಂಗಳೂರು ವಿಭಾಗದ ೨೫೧ ರೈಲುಗಳ ಸಂಚಾರದ ವೇಳಾಪಟ್ಟಿಯನ್ನು ಜನವರಿ ಒಂದ ರಿಂದ ಅನ್ವಯವಾಗುವಂತೆ ಪರಿಷ್ಕರಣೆ ಮಾಡಲಾಗಿದೆ. ಎರಡು ರೈಲುಗಳ ಸೇವೆಯ ದಿನವನ್ನು ಬದಲಾಯಿಸಲಾಗಿದೆ. ಪ್ರಯಾಣಿಕರು ಪರಿಷ್ಕೃತ ಆಗಮನ ಮತ್ತು ನಿರ್ಗಮನ ಸಮಯವನ್ನು ನ್ಯಾಷನಲ್ ಟ್ರೈನ್ ಎಂಕ್ವಾಯರಿ ಸಿಸ್ಟಂ ಅಥವಾ ನೈರುತ್ಯ ರೈಲ್ವೆ ವೆಬ್‌ಸೈಟ್‌ನಲ್ಲಿ ಪರಿಶೀಲಿಸುವಂತೆ ಕೋರಲಾಗಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>